**FEBRUARY 05, 2025**
**AKASHAVANI - DHARWAD**
**REGIONAL NEWS BULLETIN (KANNADA) 07.05 A.M.**

**ಮುಖ್ಯಾಂಶಗಳು**

- **ಇಂದು ಬೆಂಗಳೂರಿನಲ್ಲಿ ಉನ್ನತ ಶಿಕ್ಷಣ ಸಚಿವರ ರಾಷ್ಟ್ರೀಯ ಸಮಾವೇಶ.**
- **ಬೆಂಗಳೂರಿನಲ್ಲಿ ಇದೇ 10 ರಿಂದ ಏರೋ ಇಂಡಿಯಾ ವೈಮಾನಿಕ ಪ್ರದರ್ಶನ ಆರಂಭ: ಇಂದಿನಿಂದ ಕೆಲವು ವಿಮಾನಗಳ ಸಂಚಾರಕ್ಕೆ ನಿರ್ಬಂಧ.**
- **ರಾಜ್ಯಕ್ಕೆ ಅತ್ಯಧಿಕ ರೈಲ್ವೆ ಯೋಜನೆಗಳ ಹಂಚಿಕೆ; ರಾಜ್ಯದ ಉಜ್ವಲ ಭವಿಷ್ಯಕ್ಕೆ ಸಹಕಾರಿ – – ಕೇಂದ್ರ ಸಚಿವ ಪ್ರಲ್ಹಾದ ಜೋಶಿ.**
- **ಸಾವಯವ ರಸಗೊಬ್ಬರ ಬಳಕೆ ಹಾಗೂ ಸಿರಿಧಾನ್ಯಗಳಿಗೆ ಆದ್ಯತೆ ನೀಡುವಂತೆ ಸಚಿವ ಶರಣಬಸಪ್ಪ ದರ್ಶನಾಪೂರ್ ರೈತರಿಗೆ ಸಲಹೆ.**

**ಈಗ ವಾರ್ತೆಗಳ ವಿವರ**

**ವಿಶ್ವ ವಿದ್ಯಾಲಯ ಅನುದಾನ ಆಯೋಗ ಕುಲಪತಿಗಳ** ನೇಮಕ ಹಾಗೂ ಉನ್ನತ ಶಿಕ್ಷಣ ಸಂಸ್ಥೆಗಳಿಗೆ ಸಂಬಂಧಪಟ್ಟಂತೆ ಹೊರಡಿಸಿರುವ, ಕರಡು ನಿಯಮಾವಳಿಗಳ ಕುರಿತು ಚರ್ಚಿಸಲು ಇಂದು ಬೆಂಗಳೂರಿನಲ್ಲಿ ಉನ್ನತ ಶಿಕ್ಷಣ ಸಚಿವರ ರಾಷ್ಟ್ರೀಯ ಸಮಾವೇಶ ಆಯೋಜಿಸಲಾಗಿದೆ. ಸಮಾವೇಶದಲ್ಲಿ ಏಳು ರಾಜ್ಯಗಳ ಸಚಿವರು ಪಾಲ್ಗೊಳ್ಳಲಿದ್ದಾರೆ. ದೆಹಲಿಯಲ್ಲಿ ಚುನಾವಣೆ ನಡೆಯುತ್ತಿರುವ ಹಿನ್ನೆಲೆ, ದೆಹಲಿ ಉನ್ನತ ಶಿಕ್ಷಣ ಸಚಿವರು ಪಾಲ್ಗೊಳ್ಳುತ್ತಿಲ್ಲ. ಉಳಿದಂತೆ ಜಮ್ಮು–ಕಾಶ್ಮೀರ, ಹಿಮಾಚಲಪ್ರದೇಶ, ಜಾರ್ಖಂಡ್, ತೆಲಂಗಾಣ, ತಮಿಳುನಾಡು ಹಾಗೂ ಕೇರಳದ ಉನ್ನತ ಶಿಕ್ಷಣ ಸಚಿವರು ಪಾಲ್ಗೊಳ್ಳಲಿದ್ದಾರೆ.

<><><>

**ಬೆಂಗಳೂರಿನ ಯಲಹಂಕ ವಾಯುನೆಲೆಯಲ್ಲಿ ಇದೇ** 10 ರಿಂದ 14ರ ವರೆಗೆ 15ನೇ ಏರೋ ಇಂಡಿಯಾ ವೈಮಾನಿಕ ಪ್ರದರ್ಶನ ನಡೆಯಲಿದೆ. 2 ವ ಗಳಿಗೊಮ್ಮೆ ನಡೆಯಲಿರುವ ದೇಶದ ಅತಿ ದೊಡ್ಡ ಏರೋ ಇಂಡಿಯಾ ಪ್ರದರ್ಶನದ ಅಂಗವಾಗಿ, ವೈಮಾನಿಕ ಪ್ರದರ್ಶನದ ತಾಲೀಮು ಆರಂಭವಾಗಲಿರುವ ಹಿನ್ನೆಲೆಯಲ್ಲಿ, ದೇವನಹಳ್ಳಿಯ ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ, ಇಂದಿನಿಂದ ಇದೇ 14ರ ವರೆಗೆ ಕೆಲವು ವಿಮಾನಗಳ ಸಂಚಾರಕ್ಕೆ ನಿರ್ಬಂಧ ವಿಧಿಸಲಾಗಿದೆ. ಈ ಕುರಿತು ವಿಮಾನ ಪ್ರಯಾಣಿಕರು ತಮ್ಮ ವಿಮಾನಯಾನ ಸಂಸ್ಥೆಯನ್ನು ಸಂಪರ್ಕಿಸಿ, ವಿಮಾನಗಳ ವೇಳಾಪಟ್ಟಿಯ ಕುರಿತು ಮಾಹಿತಿ ಪಡೆದುಕೊಳ್ಳುವಂತೆ ಸೂಚಿಸಲಾಗಿದೆ.

<><><>

**ಪ್ರಧಾನಮಂತ್ರಿ ನರೇಂದ್ರ ಮೋದಿ** ಅವರ ನಾಯಕತ್ವದಲ್ಲಿ ಕರ್ನಾಟಕ ರಾಜ್ಯವು ಅಭೂತಪೂರ್ವ ಬೆಳವಣಿಗೆಗೆ ಸಾಕ್ಷಿಯಾಗಿದೆ. 15 ನೇ ಹಣಕಾಸು ಆಯೋಗದಿಂದ ಕರ್ನಾಟಕದ ತೆರಿಗೆ ಪಾಲು ಶೇಕಡ 3.647 ರ ಷ್ಟು ನಿಗದಿಪಡಿಸಲಾಗಿದ್ದು, 2025–26 ನೆ ಸಾಲಿನಲ್ಲಿ 51 ಸಾವಿರದ 876 ಕೋಟಿ ತೆರಿಗೆ ಹಂಚಿಕೆ ಮಾಡಲಾಗಿದೆ ಎಂದು ಕೇಂದ್ರ ಸಚಿವ ಪ್ರಲ್ಹಾದ ಜೋಶಿ ತಿಳಿಸಿದ್ದಾರೆ. ಈ

ಕುರಿತು ಸಾಮಾಜಿಕ ಮಾಧ್ಯಮ ಎಕ್ಸ್ ಮೂಲಕ ಮಾಹಿತಿ ನೀಡಿರುವ ಅವರು, 2004 ರಿಂದ 2014ರ ಅವಧಿಯಲ್ಲಿ ಕರ್ನಾಟಕಕ್ಕೆ ಕೇವಲ 81 ಸಾವಿರದ 795 ಕೋಟಿ ನೀಡಲಾಗಿತ್ತು. 2014 ರಿಂದ 2024ರ ಅವಧಿಯಲ್ಲಿ ಕರ್ನಾಟಕಕ್ಕೆ 2 ಲಕ್ಷ 85 ಸಾವಿರದ 452 ಕೋಟಿ ತೆರಿಗೆ ಹಂಚಿಕೆ ಮಾಡಲಾಗಿದೆ. 7 ಸಾವಿರದ 564 ಕೋಟಿ ವೆಚ್ಚದಲ್ಲಿ 15 ನಿರ್ಣಾಯಕ ರೈಲ್ವೆ ಯೋಜನೆಗಳನ್ನು ನೀಡಲಾಗಿದ್ದು, ಇದು ರಾಜ್ಯಕ್ಕೆ ಅತ್ಯಧಿಕ ರೈಲ್ವೆ ಯೋಜನೆಗಳ ಹಂಚಿಕೆಯಾಗಿದೆ ಎಂದು ತಿಳಿಸಿದ್ದಾರೆ. ಸ್ಟಾರ್ಟ್ ಅಪ್‌ಗಳಿಗೆ 10 ವ ್ಗಗಳ ತೆರಿಗೆ ರಜೆಯ ಜೊತೆಗೆ 10 ಸಾವಿರ ಕೋಟಿ ಅನುದಾನ ನೀಡಲಾಗಿದೆ. ಕರ್ನಾಟಕದ ಬೆಳವಣಿಗೆಗೆ ಈ ಶಕ್ತಿಯುತ ಸುಧಾರಣೆಗಳು, ದೊಡ್ಡ ಅವಕಾಶಗಳು ಉಜ್ವಲ ಭವಿ ್ಯ ರೂಪಿಸಲಿವೆ ಮತ್ತು ನಾವೀನ್ಯತೆಯ ಶಕ್ತಿ ಕೇಂದ್ರವಾಗಿ ಹೊರಹೊಮ್ಮಲಿವೆ ಎಂದು ಹೇಳಿದ್ದಾರೆ.

<><><>

**ದೇಶದ ನಾಗರಿಕರ, ಮಕ್ಕಳ** ಆರೋಗ್ಯ ಮತ್ತು ಭವಿ ್ಯದ ಹಿತದೃಷ್ಟಿಯಿಂದ ರೈತರು ತಮ್ಮ ಬೆಳೆಗಳಲ್ಲಿ ಹೆಚ್ಚಿನ ರಾಸಾಯನಿಕಗಳು ಬಳಸದಂತೆ ಯಾದಗಿರಿ ಜಿಲ್ಲಾ ಉಸ್ತುವಾರಿ ಸಚಿವ ಶರಣಬಸಪ್ಪ ದರ್ಶನಾಪೂರ್ ಸಲಹೆ ನೀಡಿದ್ದಾರೆ. ಯಾದಗಿರಿ ನಗರದ ಜಿಲ್ಲಾ ಕ್ರೀಡಾಂಗಣದಲ್ಲಿ ಜಿಲ್ಲಾ ಮಟ್ಟದ ಸಿರಿಧಾನ್ಯ ಮತ್ತು ಸಾವಯವ ಹಬ್ಬ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ದವಸಧಾನ್ಯ, ತರಕಾರಿ ೆ ಹಾಗೂ ಹಣ್ಣುಗಳಿಗೆ ಹೆಚ್ಚಿನ ರಾಸಾಯನಿಕ ಬಳಕೆಯು ವಿ ಯುಕ್ತ ಆಹಾರವಾಗಿ ಪರಿಣಮಿಸುವುದರಿಂದ, ರೈತರು ಸಾವಯವ ರಸಗೊಬ್ಬರ ಮತ್ತು ಸಿರಿಧಾನ್ಯಗಳಂತಹ ಬೆಳೆಗಳಿಗೆ ಒತ್ತು ನೀಡಬೇಕು ಎಂದರು. ಯೋಜನಾ ಬದ್ಧವಾಗಿ ರಾಸಾಯನಿಕವಲ್ಲದ ಕೃಷಿ ಪದ್ಧತಿ, ಅಳವಡಿಸಲು ವಿಶೇ ಗಮನಹರಿಸಬೇಕು. ಸರ್ಕಾರವು ಸಹ ಕೃಷಿ, ರಾಶಿ ಯಂತ್ರೋಪಕರಣಗಳು, ತುಂತುರು, ಹನಿ ನೀರಾವರಿ ಸೇರಿದಂತೆ ಹಲವು ರೀತಿಯಲ್ಲಿ ಸಬ್ಸಿಡಿ ಸೌಲಭ್ಯಗಳನ್ನು ನೀಡುತ್ತಿದ್ದು, ಹೈನುಗಾರಿಕೆಗೂ ಉತ್ತೇಜನ ನೀಡುತ್ತಿದೆ. ವಿಜ್ಞಾನ ಕೇಂದ್ರ ಹಾಗೂ ಕೃಷಿ ಮಹಾವಿದ್ಯಾಲಯಗಳ ಮೂಲಕವೂ ರೈತರಿಗೆ ಅರಿವು ಮೂಡಿಸುತ್ತಿದ್ದು, ಇದರ ಸದುಪಯೋಗ ಪಡೆಯುವಂತೆ ಕರೆ ನೀಡಿದರು.

<><><>

**ಬೆಂಗಳೂರು ಗ್ರಾಮಾಂತರ** ಜಿಲ್ಲೆಯ ದೇವನಹಳ್ಳಿ ತಾಲ್ಲೂಕು ವಿಶ್ವನಾಥಪುರ ಸೇರಿದಂತೆ ಸುತ್ತಮುತ್ತಲಿನ ಪ್ರದೇಶಗಳಲ್ಲಿ ಆಗುತ್ತಿರುವ ರಾಷ್ಟ್ರೀಯ ಹೆದ್ದಾರಿ ಅಪಘಾತಗಳಿಗೆ ಸಂಬಂಧಪಟ್ಟಂತೆ ಚರ್ಚಿಸಲು ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ಅಧಿಕಾರಿಗಳೊಂದಿಗೆ ಸಭೆ ನಡೆಸಲಾಗುವುದು ಎಂದು ಬೆಂಗಳೂರು ಗ್ರಾಮಾಂತರ ಜಿಲ್ಲಾ ಉಸ್ತುವಾರಿ ಸಚಿವ ಕೆ.ಎಚ್.ಮುನಿಯಪ್ಪ ತಿಳಿಸಿದ್ದಾರೆ.ದೇವನಹಳ್ಳಿ ತಾಲ್ಲೂಕಿನ ಸೋಲೂರು ಗ್ರಾಮಕ್ಕೆ ಭೇಟಿ ನೀಡಿ ನಂತರ ಮಾತನಾಡಿದ ಅವರು, ಸುಗಮ ಸಂಚಾರಕ್ಕೆ ಹೆಚ್ಚಿನ ಆದ್ಯತೆಯನ್ನು ನೀಡಲಾಗುವುದು ಎಂದರು.

<><><>

**ಪ್ರದೇಶ ಸಮಾಚಾರ ಕೇಳುತ್ತಿದ್ದೀರಿ..**

<><><>

**ಆಕಾಶವಾಣಿ ಸುದ್ದಿಗಳಿಗಾಗಿ, ನಮ್ಮ X ಖಾತೆ @airnews_dharwad ಹಾಗೂ**

**ನಮ್ಮ ಫೇಸ್ಬುಕ್ ಖಾತೆ Airrnu Dharwad ಅನುಸರಿಸಿ.**

<><><>

**ಕ್ಯಾನ್ಸರ್ ರೋಗವನ್ನು ತಡೆಗಟ್ಟಲು** ಹಾಗೂ ಅದರಿಂದ ರೋಗಿಗಳಿಗೆ ಆಗುವ ಹೆಚ್ಚಿನ ಶಾರೀರಿಕ ಮತ್ತು ಮಾನಸಿಕ ತೊಂದರೆಗಳನ್ನು ಕಡಿಮೆಗೊಳಿಸಲು ಉಪಶಮನ ಆರೈಕೆ ಅತೀ ಮುಖ್ಯವಾಗಿದೆ. ಧಾರವಾಡದಲ್ಲಿ ಪ್ಯಾಲಿಯೇಟಿವ್ ಕೇರ್ ಚಿಕಿತ್ಸೆಯನ್ನು ಆರಂಭಿಸಿ, ಕ್ಯಾನ್ಸರ್ ಸಹಿತ ವಿವಿಧ ರೋಗಗಳಿಗೆ ಉಪಶಮನ ಆರೈಕೆಯನ್ನು ನೀಡುತ್ತಿರುವ ಡಿಮಾನ್ಸ್ ನ ಹಿರಿಯ ಕಾರ್ಯಕ್ರಮ ಪ್ರಬಂಧಕ ಹಾಗೂ ಉಪಶಮನ ಚಿಕಿತ್ಸಕರಾದ ಡಾಕ್ಟರ್ ಮೋಹನ ಕುಮಾರ ತಂಬದ್, ಕ್ಯಾನ್ಸರ್ ರೋಗಿಗಳಿಗೆ ಚಿಕಿತ್ಸೆ ಹಾಗೂ ಆರೈಕೆಯ ಮಹತ್ವದ ಬಗ್ಗೆ ಪ್ರದೇಶ ಸಮಾಚಾರಕ್ಕಾಗಿ ಮಾಹಿತಿ ನೀಡಿದ್ದಾರೆ.

**ಧ್ವನಿ : ಮೋಹನ್ ಕುಮಾರ್ ತಂಬದ್(61ಸೆಕೆಂದುಗಳು)**

<><><>

**ಸವಿತಾ ಮಹರ್ಷಿಗಳು** ಸಮಾಜದ ಶ್ರೇಷ್ಠತೆಗೆ ಶ್ರಮಿಸಿದ ಮಹಾನ್ ಯುಗ ಪುರುಷ ಎಂದು ಶಾಸಕ ಎಚ್.ಡಿ. ತಮ್ಮಯ್ಯ ಹೇಳಿದ್ದಾರೆ. ಚಿಕ್ಕಮಗಳೂರಿನಲ್ಲಿ ಜಿಲ್ಲಾಡಳಿತದ ವತಿಯಿಂದ ಏರ್ಪಡಿಸಲಾಗಿದ್ದ ಸವಿತಾ ಮಹರ್ಷಿ ಜಯಂತಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಸವಿತಾ ಮಹರ್ಷಿಗಳು ಸಮಾಜಮುಖಿಯಾಗಿ ಬೆಳೆದು ದಾರಿದೀಪವಾಗಿದ್ದಾರೆ. ಇವರ ಆದರ್ಶಗಳನ್ನು ಪಾಲಿಸುವ ಮೂಲಕ ಇಂತಹ ಮಹಾತ್ಮರ ಜಯಂತಿಗಳ ಆಚರಣೆಯನ್ನು ಸಾರ್ಥಕಗೊಳಿಸಬೇಕು ಎಂದರು. ಪ್ರತಿಯೊಂದು ಸಮುದಾಯವನ್ನು ಗೌರವಿಸಿ, ಆದರ್ಶ ವ್ಯಕ್ತಿಗಳ ತತ್ವಗಳನ್ನು ಮುಂದಿನ ಪೀಳಿಗೆಗೆ ತಿಳಿಸುವ ನಿಟ್ಟಿನಲ್ಲಿ ಸರ್ಕಾರ, ಜಯಂತಿಗಳನ್ನು ಆಚರಿಸುತ್ತಾ ಬಂದಿದೆ. ಮಹನೀಯರುಗಳ ತತ್ವ, ಸಂದೇಶಗಳು ಸಾರ್ವಕಾಲಿಕವಾಗಿದ್ದು, ಅದರ ಅಂಶಗಳನ್ನು ಜೀವನದಲ್ಲಿ ಅಳವಡಿಸಿಕೊಂಡಾಗ ಉತ್ತಮ ಸಮಾಜ ನಿರ್ಮಿಸಲು ಸಾಧ್ಯ ಎಂದು ಶಾಸಕ ಯಶ್ಪಾಲ್. ಎ ಸುವರ್ಣ **ಉಡುಪಿಯಲ್ಲಿ** ಹೇಳಿದ್ದಾರೆ. ಸವಿತಾ ಸಮಾಜ ಬಾಂಧವರು ಶ್ರಮ ಹಾಗೂ ಕಾಯಕ ಜೀವಿಗಳಾಗಿದ್ದಾರೆ ಎಂದು **ಚಿತ್ರದುರ್ಗ** ಹೆಚ್ಚುವರಿ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಹೇಳಿದ್ದಾರೆ. ಸವಿತಾ ಮಹರ್ಷಿ ಜಯಂತಿ ಕಾರ್ಯಕ್ರಮದಲ್ಲಿ ಪಾಲ್ಗೊಂಡು, ಮಹರ್ಷಿಗಳ ಭಾವಚಿತ್ರಕ್ಕೆ ಪು ್ಪ ನಮನ ಸಲ್ಲಿಸಿ ಅವರು ಮಾತನಾಡಿದರು. **ಧಾರವಾಡ** ಜಿಲ್ಲಾಡಳಿತ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಯೋಗದಲ್ಲಿ ಧಾರವಾಡದ ಕರ್ನಾಟಕ ಕುಲ ಪುರೋಹಿತ ಆಲೂರು ವೆಂಕಟರಾವ್ ಸಭಾಭವನದಲ್ಲಿ ಇಂದು ಬೆಳಗ್ಗೆ 11 ಗಂಟೆಗೆ ಶ್ರೀ ಸವಿತಾ ಮಹರ್ಷಿ ಜಯಂತಿ ಆಯೋಜಿಸಲಾಗಿದೆ.

<><><>

## ಈಗ ಸಂಕ್ಷಿಪ್ತ ಸುದ್ದಿಗಳು

**ರಾಜ್ಯಮಟ್ಟದ ಅಲೆಮಾರಿ ಶಿಳ್ಳೇಕ್ಯಾತ – ಕಿಳ್ಳೇಕ್ಯಾತ** ಸಮುದಾಯದ ಸ್ಥಿತಿಗತಿಗಳ ಬಗ್ಗೆ ಸಂವಾದ ಕಾರ್ಯಕ್ರಮ ಹಾಗೂ ತೊಗಲು ಗೊಂಬೆಯಾಟ ಉತ್ಸವವು ಇಂದು ಧಾರವಾಡದ ಕರ್ನಾಟಕ ವಿದ್ಯಾವರ್ಧಕ ಸಂಘದಲ್ಲಿ ಆಯೋಜಿತವಾಗಿದೆ. ಪದ್ಮಶ್ರೀ ವಿಜೇತ ಖ್ಯಾತ ತೊಗಲು ಗೊಂಬೆಯಾಟ ಕಲಾವಿದೆ ಭೀಮವ್ವ ಶಿಳ್ಳೇಕ್ಯಾತರ, ರಾಜ್ಯೋತ್ಸವ ಪ್ರಶಸ್ತಿ ವಿಜೇತ ನಾರಾಯಣಪ್ಪ ಶಿಳ್ಳೇಕ್ಯಾತರ, ಕೇಶವಪ್ಪ ಶಿಳ್ಳೇಕ್ಯಾತರ ಅವರಿಗೆ ಗೌರವ ಸನ್ಮಾನ ನಡೆಯಲಿದೆ. ಕಾರ್ಮಿಕ ಖಾತೆ ಸಚಿವ ಸಂತೋಷ್ ಲಾಡ್ ಕಾರ್ಯಕ್ರಮ ಉದ್ಘಾಟಿಸಲಿದ್ದಾರೆ.

<><><>

**ಮಕ್ಕಳಿಗೆ ಶಿಕ್ಷಣ ಹಾಗೂ ರಕ್ಷಣೆ ನೀಡುವುದು** ಶಿಕ್ಷಕರ ಕರ್ತವ್ಯವಾಗಿದೆ ಎಂದು ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯ ಶೇಖರಗೌಡ ರಾಮತ್ನಾಳ ಗದಗನಲ್ಲಿ ಹೇಳಿದ್ದಾರೆ.

<><><>

**ಆರೋಗ್ಯವೇ** ಸಂಪತ್ತು. ನಾವು ಆರೋಗ್ಯವನ್ನು ಕಾಪಾಡುವತ್ತ ಹೆಚ್ಚಿನ ಗಮನ ಹರಿಸಬೇಕು ಎಂದು ಕೊಡಗು ಜಿಲ್ಲಾ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಅಧ್ಯಕ್ಷರಾದ ಹೊಸಮನಿ ಪುಂಡಲಿಕ ಹೇಳಿದ್ದಾರೆ.

<><><>

**ಪ್ರತಿಯೊಬ್ಬರು ಶಾಲಾ, ಕಾಲೇಜಿನ** ಶಿಕ್ಷಣದ ಜೊತೆಗೆ ಸಂವಿಧಾನ ಮತ್ತು ಭಾರತೀಯ ಕಾನೂನುಗಳ ಬಗ್ಗೆ ತಿಳಿವಳಿಕೆ ಹೊಂದುವುದು ಅಗತ್ಯ ಎಂದು ಕೋಲಾರ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ನ್ಯಾಯಾಧೀಶ ಸುನೀಲ್ ಎಸ್.ಹೊಸಮನಿ ಹೇಳಿದ್ದಾರೆ.

<><><>

**ಚಿಕ್ಕಮಗಳೂರು ಜಿಲ್ಲೆಯಲ್ಲಿ** ಕೇಂದ್ರ ಸರ್ಕಾರದ ಬೆಂಬಲ ಬೆಲೆ ಯೋಜನೆಯಡಿ ಎಫ್.ಎ.ಕ್ಯೂ ಗುಣಮಟ್ಟದ ಕಡಲೆಕಾಳು ಉತ್ಪನ್ನವನ್ನು ಪ್ರತಿ ಕ್ವಿಂಟಾಲ್‌ಗೆ 5 ಸಾವಿರದ 650 ರಂತೆ ಖರೀದಿಸಲಾಗುವುದು ಎಂದು ಜಿಲ್ಲಾಧಿಕಾರಿ ಮೀನಾ ನಾಗರಾಜ್ ಸಿ.ಎನ್. ತಿಳಿಸಿದ್ದಾರೆ.

<><><>

**ಹಾವೇರಿಯ ಹುಕ್ಕೇರಿಮಠದ** ಶ್ರೀ ಶಿವಲಿಂಗೇಶ್ವರ ಮಹಿಳಾ ಮಹಾವಿದ್ಯಾಲಯದಲ್ಲಿ ಇಂದು ಜಿಲ್ಲಾ ಮಟ್ಟದ ಉದ್ಯೋಗ ಮೇಳ ಆಯೋಜಿಸಲಾಗಿದೆ ಎಂದು ಜಿಲ್ಲಾಧಿಕಾರಿ ಡಾಕ್ಟರ್ ವಿಜಯ ಮಹಾಂತೇಶ ದಾನಮ್ಮನವರ ತಿಳಿಸಿದ್ದಾರೆ.

<><><>

**ಮಂಡ್ಯ ಜಿಲ್ಲಾಡಳಿತದ** ವತಿಯಿಂದ ಈಗಾಗಲೇ ಸಮೀಕ್ಷೆ ನಡೆಸಿ 962 ಕೆರೆಗಳ ಅಳತೆ ನಿಗದಿಪಡಿಸಲಾಗಿದ್ದು, ಒತ್ತುವರಿ ತೆರವುಗೊಳಿಸಿ ವರದಿ ನೀಡುವಂತೆ ಜಿಲ್ಲಾಧಿಕಾರಿ ಡಾಕ್ಟರ್ ಕುಮಾರ ಅಧಿಕಾರಿಗಳಿಗೆ ಸೂಚಿಸಿದ್ದಾರೆ.

<><><>